**ಕರ್ನಾಟಕ ಸರ್ಕಾರ**

ಸಂಖ್ಯೆ: ಸಂವ್ಯಶಾಇ 46 ಶಾಸನ 2012

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:11.01.2013.

## ಅಧಿಸೂಚನೆ

ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ವಿಧೇಯಕ, 2012ಕ್ಕೆ 2013 ರ ಜನವರಿ ಮಾಹೆಯ ಹತ್ತನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 05 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

XX XX XX

(XX ಲಗತ್ತಿಸಲಾದ ವಿಷಯವನ್ನು ಇಲ್ಲಿ ಸೇರಿಸತಕ್ಕದ್ದು)

1. ಕರ್ನಾಟಕ ರಾಜ್ಯಪತ್ರದ ಸಂಕಲನಕಾರರು, ಬೆಂಗಳೂರು, ಇವರಿಗೆ ಕರ್ನಾಟಕ ರಾಜ್ಯಪತದ ವಿಶೇಷ ಸಂಚಿಕೆಯ ಭಾಗ IV-A ದಲ್ಲಿ ದಿನಾಂಕ: 11.01.2013 ರಂದು ಪ್ರಕಟಿಸಬೇಕೆಂದು ಕೋರಿದೆ. ಇದರ ಮುದಿತ ಬಿಡಿ ಪತಿಗಳನ್ನು ವಾಡಿಕೆಯ ಕ್ರಮದಂತೆ 50 ಪ್ರತಿಗಳನ್ನು ಪಾರೂಪಣಾ ಶಾಖೆ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಗೂ, 200 ಪತಿಗಳನ್ನು ನೇರವಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಗೂ ಮತ್ತು 100 ಪ್ರತಿಗಳನ್ನು ಈ ಇಲಾಖೆಯ ಪ್ರಕಟಣೆ ಹಾಗೂ 100 ಪ್ರತಿಗಳನ್ನು ಕ್ರೋಢೀಕರಣ ಶಾಖೆಗೂ ಕಳುಹಿಸಿ ಕೊಡತಕ್ಕದ್ದು.

2. ನಿರ್ದೇಶಕರು, ಭಾಷಾಂತರ ನಿರ್ದೇಶನಾಲಯ, ಬೆಂಗಳೂರು.

**ಪ್ರತಿಗಳು:**

1. ಸರ್ಕಾರದ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಇಲಾಖೆ, ಬೆಂಗಳೂರು. (**ಅಧಿನಿಯಮದ ಪ್ರತಿಗಳನ್ನು ನೇರವಾಗಿ ಸರ್ಕಾರಿ ಮುದ್ರಣಾಲಯದಿಂದ ಪಡೆದುಕೊಳ್ಳುವಂತೆ ಕೋರಲಾಗಿದೆ**).
2. ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು (ಮೇಲ್ಪತ್ರದೊಂದಿಗೆ)
3. ಸಚಿವ ಸಂಪುಟ ಶಾಖೆ (ಸಿ:514/2012)
4. ಪ್ರಕಟಣಾ ಶಾಖೆ : ಕ್ರೋಢೀಕರಣ ಶಾಖೆ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.
5. ಬಿಡಿ ಪ್ರತಿಗಳು.

## 2013ರ ಕರ್ನಾಟಕ ಅಧಿನಿಯಮ ಸಂಖ್ಯೆ 05

(2013ರ ಜನವರಿ ಹನ್ನೊಂದನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ಅಧಿನಿಯಮ 2012

(2013ರ ಜನವರಿ ಹತ್ತನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) ಅಧಿನಿಯಮ, 1987ನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) ಅಧಿನಿಯಮ, 1987ನ್ನು (1987ರ ಕರ್ನಾಟಕ ಅಧಿನಿಯಮ 20) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ಮೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 4ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) ಅಧಿನಿಯಮ, 1987ರಲ್ಲಿ (1987ರ ಕರ್ನಾಟಕ ಅಧಿನಿಯಮ 20) 4ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ, "ಮೂವತ್ತು ದಿನಗಳೊಳಗಾಗಿ" ಎಂಬ ಪದಗಳಿಗೆ "ಅರವತ್ತು ದಿನಗಳೊಳಗಾಗಿ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

(ಜಿ.ಕೆ.ಬೋರೇಗೌಡ)
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ